ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE : 03/03/2020

# ವಿಧಾನಸಭೇಲಿ ಗದ್ದಲ, ಕೋಲಾಹಲ

## ಆಡಳಿತ–ವಿಪಕ್ಷಗಳ ಮಧ್ಯೆ ವಾಕ್ಸಮರ, ಹೇಳಿಕೆ ಬಗ್ಗೆ ಚರ್ಚೆಗೆ ಪ್ರತಿಪಕ್ಷಗಳ ಆಗ್ರಹ

• **ಕನ್ನಡಪ್ರಭ ವಾರ್ತೆ** ವಿಧಾನಸಭೆ

ಸ್ವಾತಂತ್ರ್ಯ ಹೋರಾಟಗಾರ ಎಚ್.ಎಸ್.ದೊರೆಸ್ವಾಮಿ ಕುರಿತು ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿಕೆಯು ಸದನದಲ್ಲಿ ಆಡಳಿತ ಮತ್ತು ಪ್ರತಿಪಕ್ಷದ ನಡುವೆ ತೀವ್ರ ವಾಕ್ಸಮರ, ಗದ್ದಲ ಉಂಟಾದ ಪರಿಣಾಮ ಕಲಾಪವು ಮಂಗಳವಾರಕ್ಕೆ ಮುಂದೂಡಿಕೆಯಾಯಿತು.



ಪ್ರತಿಪಕ್ಷದ ಗದ್ದಲ ನಡುವೆಯೇ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ರಾಜ್ಯಪಾಲರ ಭಾಷಣದ ಮೇಲಿನ ಚರ್ಚೆಗೆ ಉತ್ತರಿಸಿದರು. ಅಲ್ಲದೇ, ರಾಜ್ಯ ಸರ್ಕಾರವು ಎಂಟು ವಿಧೇಯಕಗಳನ್ನು ಮಂಡಿಸಿತು. ಯಾವುದೇ ಚರ್ಚೆಗೆ ಅವಕಾಶ ನೀಡದೆ ಸದನದಲ್ಲಿ ತೀವ್ರ ಕೋಲಾಹಲ ಉಂಟಾದ ಕಾರಣ ಕಲಾಪವನ್ನು ಮುಂದೂಡಲಾಯಿತು. ಸೋಮವಾರ ಸದನ ಆರಂಭವಾಗಿ ಅಗಲಿದ ಗಣ್ಯರಿಗೆ ಸಂತಾಪ ಸೂಚನೆ ನಿರ್ಣಯಕ್ಕೆ ಗೊಳ್ಳಲಾಯಿತು. ಬಳಿಕ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ, ಸಾತಂತ್ರ್ಯ ಹೋರಾಟಗಾರ ಎಚ್.ಎಸ್. ದೊರೆಸ್ವಾಮಿ ಕುರಿತು ಆಡಳಿತ ಪಕ್ಷದ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ನೀಡಿದ ಹೇಳಿಕೆ ಟೀಕಿಸಿ ಚರ್ಚೆಗೆ ಅವಕಾಶ ನೀಡಬೇಕೆಂದು ಪ್ರಸ್ತಾವನೆ ಸಲ್ಲಿಕೆಗೆ ಮುಂದಾದರು. ಸಭಾಧ್ಯಕ್ಷರು ವಿವೇಚನಾಧಿಕಾರ ಬಳಸಿ ಚರ್ಚೆಗೆ ಅವಕಾಶ ಕೊಡಬೇಕು ಎಂದು ಒತ್ತಾಯಿಸಿದರು. ಆದರೆ, ಪ್ರತಿಪಕ್ಷ ನಾಯಕರ ಒತ್ತಾಯಕ್ಕೆ ಕಾನೂನು ಸಚಿವ ಜೆ.ಸಿ. ಮಾಧುಸ್ವಾಮಿ, ಗೃಹ ಸಚಿವ ಬಸವರಾಜ ಬೊಮ್ಮಾಯಿ ಆಕ್ಷೇಪಿಸಿದರು. ಸಭಾಧ್ಯಕ್ಷರು ಸಹ ಆಡಳಿತ ಪಕ್ಷದ ವಾದಕ್ಕೆ ಸಹಮತ ವ್ಯಕ್ತಪಡಿಸಿದರು. ಇದು ಪ್ರತಿಪಕ್ಷ ಸದಸ್ಯರನ್ನು ಕೆರಳಿಸಿತು. ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಸದನಕ್ಕೆ ಅಗೌರವ ತೋರಿದ್ದಾರೆ. ಹೀಗಾಗಿ ಚರ್ಚೆಗೆ ಅವಕಾಶ ಬೇಕೆಂದು ಪಟ್ಟು ಹಿಡಿದರು.

ಯತ್ನಾಳ್ ಹೇಳಿಕೆಯು ಸಂವಿಧಾನ ವಿರೋಧಿಯಾಗಿದ್ದು, ಸದನದ ಹಕ್ಕುಚ್ಯುತಿಯಾಗಿದೆ. ಸಾರ್ವಜನಿಕವಾಗಿ ತಪ್ಪು ಸಂದೇಶ ಹೋಗುತ್ತದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸಿದ್ದರಾಮಯ್ಯ ಹೇಳಿಕೆಗೆ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಸಹಮತ ವ್ಯಕ್ತಪಡಿಸಿದರೂ ಚರ್ಚೆಗೆ ಅವಕಾಶ ನೀಡಲಿಲ್ಲ. ಪ್ರತಿಪಕ್ಷದಿಂದ ತೀವ್ರ ಒತ್ತಡ ಬಂದಾಗ ಸರ್ಕಾರ ಸಹಮತ ವ್ಯಕ್ತಪಡಿಸಿದರೆ ಚರ್ಚೆಗೆ ಅವಕಾಶ ನೀಡಲು ಯಾವುದೇ ಆಕ್ಷೇಪ ಇಲ್ಲ ಎಂದರು. ಆದರೆ, ಕಾನೂನು ಸಚಿವ ಮಾಧುಸ್ವಾಮಿ ನೋಟಿಸ್ ನೀಡದೆ ಮನಬಂದಂತೆ ವಿಷಯ ಪ್ರಸ್ತಾಪಿಸಲು ಅವಕಾಶ ಇಲ್ಲ ಎಂದು ಹೇಳಿದರು. ಈ ವೇಳೆ ಆಡಳಿತ ಮತ್ತು ಪ್ರತಿಪಕ್ಷದ ನಡುವೆ ತೀವ್ರ ವಾಕ್ಸಮರ, ಕೋಲಾಹಲ ಉಂಟಾಯಿತು. ಇಷ್ಟಾದರೂ ಸಭಾಧ್ಯಕ್ಷರು ಚರ್ಚೆಗೆ ಅವಕಾಶ ನೀಡದಿರುವುದಕ್ಕೆ ಆಕ್ರೋಶಗೊಂಡ ಕಾಂಗ್ರೆಸ್ ಸದಸ್ಯರು ಬಾವಿಗಿಳಿದು ಧರಣಿ ಆರಂಭಿಸಿದರು. ಇದಕ್ಕೆ ಜೆಡಿಎಸ್‌ನ ಸದಸ್ಯರು ಸಹ ಸಾಥ್ ನೀಡಿದರು. ಪ್ರತಿಪಕ್ಷದ ಸದಸ್ಯರ ಗದ್ದಲದ ನಡುವೆಯೇ ಮುಖ್ಯಮಂತ್ರಿ ಯಡಿಯೂರಪ್ಪ ಅವರು ರಾಜ್ಯಪಾಲರ ಭಾಷಣದ ಮೇಲಿನ ಚರ್ಚೆಗೆ ಉತ್ತರಿಸಿದರು.